ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	2370
ಸದಸ್ಯರ ಹೆಸರು	:	ಶ್ರೀ ಪ್ರಕಾಶ್ ಕೆ. ರಾಥೋಡ್
ಉತ್ತರಿಸುವ ದಿನಾಂಕ	:	22/03/2022
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಡಿಸೆಂಬರ್–2021 ರಲ್ಲಿ ರಾಜ್ಯದ ಒಟ್ಟು 58 ನಗರ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆದು ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಮೀಸಲು ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ಮೀಸಲು ಪ್ರಕಟಿಸದಿರುವುದರಿಂದ, ಅಭಿವೃದ್ಧಿ ಕಾರ್ಯಗಳಿಗೆ ತೊಡಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಸ್ತುತ ಚುನಾಯಿತ ಪ್ರತಿನಿಧಿಗಳ ಸಮಿತಿಗಳು ಅಸ್ತಿತ್ವಕ್ಕೆ ಬಾರದೇ ಇರುವ ಸ್ಥಳೀಯ ಸಂಸ್ಥೆಗಳಿಗೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ 315 ರನ್ವಯ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ತೊಡಕು ಉಂಟಾಗಿರುವುದಿಲ್ಲ.
(ಇ)	ಅಧ್ಯಕ್ಷರ ಹಾಗೂ ಉಪಾಧ್ಯಕ್ಷರ ಮೀಸಲಾತಿಯನ್ನು ಪ್ರಕಟಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;	ನಗರಾಭಿವೃದ್ಧಿ ಇಲಾಖೆಯು ಹಲವು ನಗರ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಿದ್ದು, ಅವುಗಳನ್ನು ಒಳಗೊಂಡಂತೆ ರಾಜ್ಯವನ್ನು ಒಂದು ಘಟಕವನ್ನಾಗಿಟ್ಟುಕೊಂಡು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಕರ್ನಾಟಕ ಪೌರಸಭೆಗಳ ಕಾಯ್ದೆ 1964ರ ಕಲಂ 11 ರನ್ವಯ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸಲು ನಿಯಮವನ್ನು ರಚಿಸಲು ಕ್ರಮವಹಿಸಲಾಗುತ್ತಿದೆ. ಏತನ್ಮಧ್ಯೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ State of Maharashtra v/s Union of India ರವರು ಸಲ್ಲಿಸಿರುವ ರಿಟ್ ಪಿಟಿಷನ್ (ಸಿವಿಲ್) ಸಂಖ್ಯೆ: 841/2021 c/w ಎಸ್.ಎಲ್.ಪಿ. ಸಂಖ್ಯೆ: 19756/2021 ರಲ್ಲಿ ದಿನಾಂಕ: 15-12-2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಶನ್ ಸಂಖ್ಯೆ: 31495/2021 ಗೆ ಸಂಬಂಧಿಸಿದಂತೆ ದಿನಾಂಕ: 17-12-2021 ರ ಆದೇಶದಲ್ಲಿ ಡಾ॥ ಕೆ.ಕೃಷ್ಣಮೂರ್ತಿ ಮತ್ತು ಇತರರು ಸಲ್ಲಿಸಿದ್ದ ರಿಟ್ ಅರ್ಜಿ (ಸಿವಿಲ್) ಸಂಖ್ಯೆ: 256/1994 ರಲ್ಲಿ ದಿನಾಂಕ:
(ಈ)	ಅಧ್ಯಕ್ಷರ ಹಾಗೂ ಉಪಾಧ್ಯಕ್ಷರ ಎಷ್ಟು ಮೀಸಲು ಸ್ಥಾನ ಘೋಷಣೆಯಾಗಿದೆ ಹಾಗೂ ಆಡಳಿತ ಮಂಡಳಿ ರಚನೆಯಾಗಿದೆಯೇ? (ವಿವರ ಒದಗಿಸುವುದು)	

		11-05-2010 ರಂದು ನೀಡಿರುವ ಆದೇಶವನ್ನು ಪುನರ್ ಪರಿಶೀಲಿಸಿ ಪ್ರಸ್ತುತ ನಿಗದಿಪಡಿಸುತ್ತಿರುವ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಮುಂದಿನ ಆದೇಶದವರೆಗೆ ನಿಗದಿಪಡಿಸದೇ ಸಂವಿಧಾನದ ಪ್ರಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ ನಿಗದಿಪಡಿಸಿ, ಉಳಿದ ಹುದ್ದೆಗಳನ್ನು ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಬೇಕಾಗಿರುತ್ತದೆ ಎಂದು ಉಲ್ಲೇಖಿಸಲಾಗಿದೆ. ಮಾನ್ಯ ಸರ್ವೋಚ್ಛ ನ್ಯಾಯಾಲಯದ ಮೇಲ್ಕಂಡ ಆದೇಶದ ಸಾಧಕ ಬಾಧಕಗಳ ಬಗ್ಗೆ ಚರ್ಚಿಸಿ ಸರ್ಕಾರದಿಂದ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು.

ಸಂಖ್ಯೆ: ನಅಇ 30 ಎಲ್‌ಸಿಕ್ಯೂ 2022

(ಎನ್. ನಾಗರಾಜು ಎಂ ಟಿ ಬಿ)
ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು